**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**

**ಸಿ.ಸಿ.462/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಹೆಚ್.ಕೆ. ಮೊಹಮ್ಮದ್ ಆರೀಪ್ | ಪ್ರಾಸಾ-7 |
| ತಂದೆಯ ಹೆಸರು | : ಕೆ.ಬಿ. ಹಸನಪ್ಪ | ಚಾಸಾ-8 |
| ವಯಸ್ಸು | : 49 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಸಮಾಜ ಸೇವಕ | ದಿನಾಂಕಃ 23.05.2025 |
| ವಾಸಸ್ಥಳ | : ಬಣಕಲ್ | |

**:ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿಲ್ಲ. ಚಾಸಾ-1, 2 ಮತ್ತು 6 ರವರ ಪರಿಚಯ ನನಗಿರುವುದಿಲ್ಲ.

ಸಾಕ್ಷಿಯು ನಿಪಿ-5 ರ ಮಹಜರ್ ನಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು, ಅದನ್ನು ನಿಪಿ-5(ಸಿ) ಎಂದು ಗುರುತಿಸಲಾಯಿತು. ನಿಪಿ-6 ರಲ್ಲಿ ತಮ್ಮ ಇರುವಿಕೆಯ ಬಗ್ಗೆ ಗುರುತಿಸುತ್ತಾರೆ.

ಕಳೆದ 6-7 ತಿಂಗಳ ಹಿಂದೆ ನಾನು ಬಣಕಲ್ ಪೋಲಿಸ್ ಠಾಣೆಯಲ್ಲಿ ನಿಪಿ-5 ಕ್ಕೆ ಸಹಿಯನ್ನು ಮಾಡಿರುತ್ತೇನೆ. ಸದರಿ ಸಹಿಯನ್ನು ಯಾವ ವಿಚಾರಕ್ಕೆ ಮಾಡಿರುತ್ತೇನೆ ಎಂದು ತಿಳಿದಿರುವುದಿಲ್ಲ. ಪೋಲಿಸರ ಕೋರಿಕೆಯ ಮೇರೆಗೆ ಸಹಿಯನ್ನು ಮಾಡಿರುತ್ತೇನೆ. ನಿಪಿ-5 ರಲ್ಲಿ ಏನನ್ನು ಬರೆದಿದೆ ಎಂದು ನಾನು ಓದಿ ತಿಳಿದುಕೊಂಡಿಲ್ಲ ಹಾಗೆಯೇ ಪೋಲಿಸರು ಓದಿ ತಿಳಿಸಿರುವುದಿಲ್ಲ. ಎಂ.ಒ.1 ನ್ನು ಈ ಹಿಂದೆ ನಾನು ನೋಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನಿಪಿ-5 ರ ಸಹಿಯನ್ನು ದಿ.10.11.2023 ರಂದು ಚಾಸಾ-1 ರವರು ಬಣಕಲ್ ಪೋಲಿಸ್ ಠಾಣಾ ಆವರಣದಲ್ಲಿ ತಾವು ಧರಿಸಿದ್ಧ ಸಮವಸ್ತ್ರದ ಶರ್ಟ್ ನ್ನು ಹಾಜರುಪಡಿಸಿದಾಗ ಅದನ್ನು ಅಮಾನತುಪಡಿಸಿಕೊಳ್ಳುವ ಸಮಯದಲ್ಲಿ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ನ್ಯಾಯಾಲಯದ ಮುಂದಿರುವ ಎಂ.ಒ.1 ನ್ನು ಸದರಿ ದಿನ ಅಮಾನತುಪಡಿಸಿಕೊಳ್ಳಲಾಗಿದೆ ಎಂದರೆ ಸರಿಯಲ್ಲ. ಅದೇ ಸಮಯದಲ್ಲಿ ನಿಪಿ-6 ರ ಪೋಟೋಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.</u>**
**<u>ಮರು ವಿಚಾರಣೆ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ  ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್  ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.462/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಕೊರಗಪ್ಪ | ಪ್ರಾಸಾ-8 |
| ತಂದೆಯ ಹೆಸರು | : ಮೊನಪ್ಪ ಪೂಜಾರಿ | ಚಾಸಾ-10 |
| ವಯಸ್ಸು | : 56 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ವಾಟರ್ ಮ್ಯಾನ್ | ದಿನಾಂಕಃ 23.05.2025 |
| ವಾಸಸ್ಥಳ | : ಚೇಗು | |

**:ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿಲ್ಲ. ಚಾಸಾ-9 ರವರ ಪರಿಚಯ ನನಗಿರುವುದಿಲ್ಲ.

ಸಾಕ್ಷಿಗೆ ಅಮಾನತು ಮಹಜರ್ ನ್ನು ತೋರಿಸಲಾಗಿ ಸಾಕ್ಷಿಯು ಗುರುತಿಸಿದ್ದು ಅದನ್ನು ನಿಪಿ-9, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-9(ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಒಂದು ಪೋಟೋವನ್ನು ತೋರಿಸಲಾಗಿ ಅದನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-10 ಎಂದು ಗುರುತಿಸಲಾಯಿತು.

ನಾನು ಬಣಕಲ್ ಪೋಲಿಸ್ ಠಾಣೆಯ ಬಳಿ ಪೈಪಿಂಗ್ ಕೆಲಸ ಮಾಡುವಾಗ ಪೋಲಿಸರ ಕೋರಿಕೆಯ ಮೇರೆಗೆ ನಿಪಿ-9 ಕ್ಕೆ ಸಹಿಯನ್ನು ಮಾಡಿರುತ್ತೇನೆ. ನಿಪಿ-10 ನ್ನು ಅದೇ ದಿನ ತೆಗೆಯಲಾಗಿರುತ್ತದೆ. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಎಂ.ಒ.2 ರ ಮೇಲಿರುವ ಸಾಕ್ಷಿಯ ಸಹಿಯನ್ನು ನೋಡಿ ಗುರುತಿಸುತ್ತಾರೆ. ಅದನ್ನು ಎಂ.ಒ.2(ಎ) ಎಂದು ಗುರುತಿಸಲಾಯಿತು. ಸದರಿ ಎಂ.ಒ.2 ಅನ್ನು ಈ ಹಿಂದೆ ನಾನು ನೋಡಿರುವುದಿಲ್ಲ. ನಾನು ನಿಪಿ-9 ಕ್ಕೆ ಸಹಿ ಮಾಡುವಾಗ ಸಮಯ ಸುಮಾರು ಮ.2.00 ರಿಂದ 2.30 ಆಗಿರಬಹುದು. ಆ ಸಮಯದಲ್ಲಿ ಪೋಲಿಸರನ್ನು ಹೊರತುಪಡಿಸಿ ಇತರರು ಯಾರೂ ಹಾಜರಿರುವುದಿಲ್ಲ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಇನ್ನ್ಯಾವುದೇ ವಿಚಾರ ನನಗೆ ತಿಳಿದಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ದಿ.20.01.2024 ರಂದು ಬಣಕಲ್ ಪೋಲಿಸ್ ಠಾಣೆಯಲ್ಲಿ ನಾನು ನಿಪಿ-9 ಕ್ಕೆ ಸಹಿ ಮಾಡುವಾಗ ನ್ಯಾಯಾಲಯದ ಮುಂದೆ ಇರುವ ಆರೋಪಿ ಮತ್ತು ಚಾಸಾ-9 ರವರು ಹಾಜರಿದ್ದರು ಎಂದರೆ ಸರಿಯಲ್ಲ. ಸದರಿ ದಿನ ಒಂದು ಸ್ಕೂಟರ್ ಅನ್ನು ನಿಲ್ಲಿಸಿದ್ದರು ಎಂದರೆ ಸರಿ ಆದರೆ ಸದರಿ

ವಾಹನದ ನೊಂದಣಿ ಸಂಖ್ಯೆ KA-18-EK-1536 ಎಂದರೆ ನನಗೆ ನೆನಪಿರುವುದಿಲ್ಲ. ಅದೇ ದಿನ ಎಂ.ಒ.2 ನ್ನು ನಾನು ಕೃತ್ಯಕ್ಕೆ ಬಳಸಿದ್ದೆ ಎಂದು ನ್ಯಾಯಾಲಯದ ಮುಂದಿರುವ ಆರೋಪಿ ಹಾಜರು ಮಾಡಿರುತ್ತಾರೆ ಎಂದರೆ ಸರಿಯಲ್ಲ. ಸ್ಕೂಟರ್ ಮತ್ತು ಎಂ.ಒ.2 ನ್ನು ಅಮಾನತುಪಡಿಸಿಕೊಂಡ ಕಾಲಕ್ಕೆ ನಾನು ನಿಪಿ-9 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆಗ ಸಮಯ ಸ.4.15 ರಿಂದ 5.30 ಗಂಟೆ ಸಮಯವಾಗಿತ್ತು ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ಒಂದು ಫೋಟೋವನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು: ಆರೋಪಿ ಪರ ಹೆಚ್.ಎಸ್.ಆರ್. ವಕೀಲರಿಂದ</u>**

ನಿಪಿ-9 ನ್ನು ಬರೆಯುವ ಕಾಲದಲ್ಲಿ ಯಾವುದೇ ಸ್ಕೂಟರ್ ಹಾಜರುಮಾಡಿರುವುದಿಲ್ಲ ಎಂದರೆ ಸರಿ. ಸದರಿ ಸಮಯದಲ್ಲಿ ಹಾಜರು ಮಾಡಲಾಗಿದ್ದ ಸ್ಕೂಟರ್ ಯಾರಿಗೆ ಸಂಬಂಧಪಟ್ಟಿರುತ್ತದೆ ಎಂದು ನನಗೆ ತಿಳಿದಿರುವುದಿಲ್ಲ.

**<u>ಮರು ವಿಚಾರಣೆ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.